# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 24(109) |
| ಮಾನ್ಯ ಸದಸ್ಯರ ಹೆಸರು | ಶ್ರೀಮತಿ ಹೇಮಲತಾ ನಾಯಕ್ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ಸಚಿವರು | ಉನ್ನತ ಶಿಕ್ಷಣ ಸಚಿವರು |
| ಉತ್ತರಿಸಬೇಕಾದ ದಿನಾಂಕ | 09.12.2024 |

| | ಪ್ರಶ್ನೆ | ಉತ್ತರ |
|---|---|---|
| (ಅ) | ಉನ್ನತ ಶಿಕ್ಷಣ ಇಲಾಖೆ ನಿರ್ವಹಿಸುತ್ತಿರುವ ಯುಯುಸಿಎಂಎಸ್ ತಂತ್ರಾಂಶದಲ್ಲಿ ಇರುವ ತಾಂತ್ರಿಕ ತೊಂದರೆಯಿಂದ ವಿದ್ಯಾರ್ಥಿಗಳಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: ಸದರಿ ತಂತ್ರಾಂಶ ನಿರ್ವಹಣೆ ಮಾಡುವವರು ಯಾರು ಸದರಿಯವರು ನಿರ್ವಹಣೆ ಮಾಡುವಲ್ಲಿ ವಿಫಲರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ಹಾಗಿದ್ದಲ್ಲಿ ಸರ್ಕಾರ ಕೈಗೊಂಡ ಕ್ರಮವೇನು: | ಸರ್ಕಾರದ ಗಮನಕ್ಕೆ ಬಂದಿದೆ.<br><br>ಸದರಿ ತಂತ್ರಾಂಶದ ನಿರ್ವಹಣೆಯನ್ನು ಉನ್ನತ ಶಿಕ್ಷಣ ಇಲಾಖೆಯಡಿಯ ಇ-ಆಡಳಿತ, ಸೆಂಟರ್ ಫಾರ್ ಸ್ಮಾರ್ಟ್ ಗವರ್ನೆನ್ಸ್ ಸಂಸ್ಥೆಯು ನಿರ್ವಹಿಸುತ್ತಿದೆ.<br><br>ಉನ್ನತ ಶಿಕ್ಷಣ ಇಲಾಖೆಯಡಿಯ ಇ-ಆಡಳಿತ, ಸೆಂಟರ್ ಫಾರ್ ಸ್ಮಾರ್ಟ್ ಗವರ್ನೆನ್ಸ್ ಸಂಸ್ಥೆಯು ಸರ್ಕಾರಿ ಸಂಸ್ಥೆಯಾಗಿದ್ದು UUCMS ತಂತ್ರಾಂಶವನ್ನು ಸುಗಮವಾಗಿ ನಿರ್ವಹಣೆ ಮಾಡುತ್ತಿದೆ. |
| (ಆ) | ಕಳೆದ ಎರಡು ಮೂರು ವರ್ಷಗಳಿಂದ ವಿದ್ಯಾರ್ಥಿಗಳಿಗೆ ಸಕಾಲದಲ್ಲಿ ಅಂಕ ಪಟ್ಟಿ ಸಿಗದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ವಿದ್ಯಾರ್ಥಿಗಳು ಅಂತಿಮ ವರ್ಷ ಮುಗಿಸಿದ್ದರೂ ಅಂಕ ಪಟ್ಟಿ ಸಿಗದಿರುವುದರಿಂದ ಮುಂದಿನ ಉನ್ನತ ಶಿಕ್ಷಣಕ್ಕೆ ತೊಂದರೆಯಾಗುತ್ತಿರುವುದು ಸರ್ಕಾರ ಗಮನಿಸಿದೆಯೇ; ಹಾಗಿದ್ದಲ್ಲಿ ಸದರಿ ತಂತ್ರಾಂಶ ಮುಂದುವರೆಸುವ ಬಗ್ಗೆ ಸರ್ಕಾರದ ನಿಲುವೇನು; | 2019-20 ನೇ ಸಾಲಿನಿಂದ ವಿದ್ಯಾರ್ಥಿಗಳಿಗೆ ಮುದ್ರಿತ ಅಂಕ ಪಟ್ಟಿಯ ಬದಲು DigiLockerNAD ನಲ್ಲಿ ಡಿಜಿಟಲ್ ಅಂಕ ಪಟ್ಟಿ ಸಂಗ್ರಹಿಸಿ, ಸದರಿ ಅಂಕಪಟ್ಟಿಯನ್ನು ಬಳಸಿಕೊಳ್ಳಲು ಆದೇಶ ನೀಡಲಾಗಿದೆ<br><br>ಅಂತಿಮ ವರ್ಷ ಮುಗಿಸಿದ ವಿದ್ಯಾರ್ಥಿಗಳಿಗೂ ಸಹ ಮುದ್ರಿತ ಅಂಕ ಪಟ್ಟಿಯ ಬದಲು DigiLockerNAD ನಲ್ಲಿ ಡಿಜಿಟಲ್ ಅಂಕ ಪಟ್ಟಿ ಸಂಗ್ರಹಿಸಲಾಗಿದ್ದು, ವಿದ್ಯಾರ್ಥಿಗಳು ಅದನ್ನು Download ಮಾಡಿಕೊಂಡು ಬಳಸಿಕೊಳ್ಳಲು ಆದೇಶಿಸಲಾಗಿದೆ. |
| (ಇ) | ಯುಯುಸಿಎಂಎಸ್ ತಂತ್ರಾಂಶದಿಂದಾಗಿ ವಿಶ್ವವಿದ್ಯಾಲಯಗಳು ಕಾರ್ಯನಿರ್ವಹಿಸಲು ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; (ವಿವರ ನೀಡುವುದು) | ಪ್ರಶ್ನೆ-(ಅ) ರಲ್ಲಿ ಮಾಹಿತಿ ವಿವರಿಸಿದೆ. |

| | | |
|---|---|---|
| (ಈ) | ತಂತ್ರಾಂಶ ವಿದ್ಯಾರ್ಥಿಗಳ ಭವಿಷ್ಯದ ದೃಷ್ಟಿಯಿಂದ ರದ್ದುಪಡಿಸಲು ಸರ್ಕಾರಕ್ಕೆ ಇರುವ ತೊಂದರೆ ಏನು: ಸರ್ಕಾರ ಯುಯುಸಿಎಂಎಸ್ ತಂತ್ರಾಂಶ ಬಳಕೆಯನ್ನು ರದ್ದುಪಡಿಸಿ ಈ ಹಿಂದಿನಂತೆ ವಿಶ್ವವಿದ್ಯಾಲಯಗಳ ವ್ಯಾಪ್ತಿಗೆ ತಂತ್ರಾಂಶ ಹೊಂದಲು ಅವಕಾಶ ನೀಡುತ್ತದೆಯೇ: ಇದರ ಕುರಿತು ಸರ್ಕಾರದ ನಿಲುವೇನು? | UUCMS ತಂತ್ರಾಂಶವು ಉನ್ನತ ಶಿಕ್ಷಣ ಇಲಾಖೆಯ ಇ-ಆಡಳಿತ ಇಲಾಖೆಯಡಿಯ, ಸೆಂಟರ್ ಫಾರ್ ಸ್ಮಾರ್ಟ್ ಗವರ್ನೆನ್ಸ್ ಸಂಸ್ಥೆಯಿಂದ ಅಭಿವೃದ್ಧಿಪಡಿಸಿ, ಉನ್ನತ ಶಿಕ್ಷಣ ಇಲಾಖೆಯಲ್ಲಿ, ಕಳೆದ ನಾಲ್ಕು ವರ್ಷಗಳಿಂದ ಬಳಸಲಾಗುತ್ತಿದ್ದು, ಅದರಲ್ಲಿ ನ್ಯೂನ್ಯತೆ ಕಂಡುಬಂದಲ್ಲಿ ಸರಿಪಡಿಸಲು ಕ್ರಮವಹಿಸಲಾಗುತ್ತದೆ. |

ಇಡಿ 59 ಅಅವಿ 2024

(ಡಾ|| ಎಂ.ಸಿ ಸುಧಾಕರ್)
ಉನ್ನತ ಶಿಕ್ಷಣ ಸಚಿವರು.